# All India Radio: Bangalore

## Regional Bulletin In Kannada

## 12.12.2025 / 6.40 p.m.

### ಆಕಾಶವಾಣಿ ಬೆಂಗಳೂರು

### ಪ್ರದೇಶ ಸಮಾಚಾರ

***************

ಮುಖ್ಯಾಂಶಗಳು

೧. ಬೆಂಗಳೂರು ಉಪನಗರ ರೈಲು ಯೋಜನೆಗೆ ೧೫ ಸಾವಿರದ ೭೬೭ ಕೋಟಿ ರೂಪಾಯಿ ಅನುದಾನ - ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್

ಸದನದಲ್ಲಿ ಗೃಹಲಕ್ಷ್ಮಿ ಯೋಜನೆ ಕುರಿತು ತಪ್ಪು ಮಾಹಿತಿ; ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ವಿರುದ್ಧ ಪ್ರತಿಪಕ್ಷ ನಾಯಕರಿಂದ ಆಕ್ಷೇಪ

೨. ಪರಿಶಿಷ್ಟರ ಅಭಿವೃದ್ಧಿ ಹಣ ಗ್ಯಾರಂಟಿ ಯೋಜನೆಗೆ ಬಳಕೆ; ಮೇಲ್ಮನೆಯಲ್ಲಿ ಸಚಿವ ಮಹದೇವಪ್ಪ ಸ್ಪಷ್ಟನೆ

೩. ಉತ್ತರ ಕರ್ನಾಟಕದಲ್ಲಿ ರಕ್ಷಣಾ ಕಾರಿಡಾರ್ ನಿರ್ಮಾಣಕ್ಕೆ ಸರ್ಕಾರ ನಿರ್ಧಾರ

೪. ದ್ವೇಷ ಭಾಷಣಕ್ಕೆ ಹತ್ತು ವರ್ಷಗಳ ಜೈಲು ಶಿಕ್ಷೆ ವಿಧೇಯಕ - ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅಸಮಾಧಾನ

***************

ಬೆಂಗಳೂರು ಉಪನಗರ ರೈಲು ಯೋಜನೆಗೆ ೧೫ ಸಾವಿರದ ೭೬೭ ಕೋಟಿ ರೂಪಾಯಿ ವೆಚ್ಚದಲ್ಲಿ ಮಂಜೂರಾತಿ ನೀಡಲಾಗಿದೆ. ಯೋಜನೆಯ ಕಾರಿಡಾರ್ ೨ ಮತ್ತು ೪ ರಲ್ಲಿ ಕೆಲಸಗಳನ್ನು ಕೈಗೆತ್ತಿಕೊಳ್ಳಲು ರೈಲ್ವೆ ಸಚಿವಾಲಯವು ಕೆ-ರೈಡ್‌ಗೆ ೨೪೨ ಎಕರೆ ಭೂಮಿಯನ್ನು ಒದಗಿಸಿದೆ ಎಂದು ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ.

ತುಮಕೂರು - ಚಿತ್ರದುರ್ಗ - ದಾವಣಗೆರೆ ಹೊಸ ಮಾರ್ಗ ಯೋಜನೆಗೆ ಅಗತ್ಯವಿರುವ ೯೯೮ ಹೆಕ್ಟೇರ್ ಭೂಮಿಯಲ್ಲಿ ೯೧೮ ಹೆಕ್ಟೇರ್ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ. ಈ ಯೋಜನೆಗೆ ೪೧೨ ಕೋಟಿ ರೂಪಾಯಿ ವೆಚ್ಚ ಮಾಡಲಾಗಿದ್ದು, ಪ್ರಸಕ್ತ ಹಣಕಾಸು ವರ್ಷಕ್ಕೆ ೫೪೯ ಕೋಟಿ ಹಂಚಿಕೆ ಮಾಡಲಾಗಿದೆ ಎಂದು ಹೇಳಿದ್ದಾರೆ.

ಹುಬ್ಬಳ್ಳಿ-ಅಂಕೋಲಾ ಹೊಸ ಜೋಡಿ ಮಾರ್ಗದ ಅಂದಾಜು ೧೮ ಸಾವಿರದ ೪೨೪ ಕೋಟಿ ರೂಪಾಯಿ ವೆಚ್ಚದ ಡಿಪಿಆರ್ ಅನ್ನು ಎಲ್ಲಾ ಪಾಲುದಾರರೊಂದಿಗೆ ಸಮಾಲೋಚಿಸಿ ಸಿದ್ಧಪಡಿಸಲಾಗಿದೆ.

ವನ್ಯಜೀವಿಗಳ ಮೇಲಿನ ಪರಿಣಾಮಗಳನ್ನು ತಗ್ಗಿಸಲು ಸುರಂಗಗಳು ಮತ್ತು ವಯಾಡಕ್ಟ್ ಗಳ ನಿರ್ಮಾಣವನ್ನು ಯೋಜನೆಯು ಒಳಗೊಂಡಿದೆ.

ಬೆಳಗಾವಿ ನಿಲ್ದಾಣದಲ್ಲಿ ರೈಲುಗಳನ್ನು ನಿರ್ವಹಿಸುವ ಸಾಮರ್ಥ್ಯವನ್ನು ಹೆಚ್ಚಿಸಲು ಮತ್ತು ನಗರ ವ್ಯಾಪ್ತಿಯಲ್ಲಿ ಸರಕು ದಟ್ಟಣೆಯನ್ನು ಕಡಿಮೆ ಮಾಡಲು, ಬೆಳಗಾವಿ ಸರಕು ಶೆಡ್ ಪ್ರದೇಶವನ್ನು ಪಿಟ್ ಲೈನ್ ಗಳು, ಹೆಚ್ಚುವರಿ ಪ್ಲಾಟ್‌ಫಾರ್ಮ್ ಗಳಾಗಿ ಪರಿವರ್ತಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

***************

ವಿಧಾನಸಭೆಯ ಪ್ರಶ್ನೋತ್ತರ ಕಲಾಪದಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಸದನಕ್ಕೆ ತಪ್ಪು ಮಾಹಿತಿ ನೀಡಿದ್ದಾರೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ಸೇರಿದಂತೆ ವಿರೋಧ ಪಕ್ಷದ ಸದಸ್ಯರು ಆಕ್ಷೇಪ ವ್ಯಕ್ತಪಡಿಸಿದ ಪ್ರಸಂಗ ಇಂದು ನಡೆಯಿತು.

ಸದನದಲ್ಲಿ ಪ್ರಶ್ನೋತ್ತರ ಕಲಾಪ ಮುಗಿಯುತ್ತಿದ್ದಂತೆ ಈ ವಿಷಯ ಪ್ರಸ್ತಾಪಿಸಿದ ಪ್ರತಿಪಕ್ಷ ನಾಯಕ ಆರ್.ಅಶೋಕ, ಬುಧವಾರ ಬಿಜೆಪಿಯ ಮಹೇಶ್ ಟೆಂಗಿನಕಾಯಿ ಅವರು ಪ್ರಶ್ನೋತ್ತರ ಕಲಾಪದಲ್ಲಿ ಗೃಹ ಲಕ್ಷ್ಮೀ ಯೋಜನೆಯ ಹಣಬಿಡುಗಡೆ ಸಂಬಂಧ ಕೇಳಿದ ಪ್ರಶ್ನೆಗೆ ಉತ್ತರಿಸಿದ ಲಕ್ಷ್ಮೀ ಹೆಬ್ಬಾಳ್ಕರ್ ಅವರು ಫೆಬ್ರವರಿ-ಮಾರ್ಚ್ ತಿಂಗಳ ಗೃಹ ಲಕ್ಷ್ಮೀ ಯೋಜನೆ ಹಣ ಬಿಡುಗಡೆ ಮಾಡಲಾಗಿದೆ ಎಂದು ಉತ್ತರ ನೀಡಿದ್ದಾರೆ. ಆದರೆ ಆ ಎರಡು ತಿಂಗಳ ಹಣ ಬಿಡುಗಡೆಯಾಗಿಲ್ಲ ಎಂದು ಪ್ರತಿಪಕ್ಷ ಸದಸ್ಯರು ದಾಖಲೆ ಪ್ರದರ್ಶಿಸಿದ್ದಾರೆ. ಆಗ ಮಧ್ಯಪ್ರವೇಶಿಸಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಹಣ ಬಿಡುಗಡೆಯಾಗದಿದ್ದರೆ ಹಣ ಬಿಡುಗಡೆ ಮಾಡಲು ಕ್ರಮಕೈಗೊಳ್ಳಲಾಗುವುದು ಎಂದು ವಿಧಾನಸಭೆಗೆ ತಿಳಿಸಿದ್ದಾರೆ.

***************

ಗ್ಯಾರಂಟಿ ಯೋಜನೆಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಫಲಾನುಭವಿಗಳ ಜನಸಂಖ್ಯೆಗೆ ಅನುಗುಣವಾಗಿ ಎಸ್‌ಸಿಎಸ್‌ಪಿ ಹಾಗೂ ಟಿಎಸ್‌ಪಿ ಅನುದಾನವನ್ನು ಬಳಕೆ ಮಾಡಲಾಗಿದೆ. ಆದರೆ ಹಣ ದುರ್ಬಳಕೆಯಾಗಿಲ್ಲ ಎಂದು ಸಮಾಜ ಕಲ್ಯಾಣ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ತಿಳಿಸಿದ್ದಾರೆ.

ಮೇಲ್ಮನೆಯಲ್ಲಿ ಸದಸ್ಯರಾದ ಹೇಮಲತಾ ನಾಯಕ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಗ್ಯಾರಂಟಿ ಯೋಜನೆಗಳಿಗೆ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅಡಿಯಲ್ಲಿ ಅನುದಾನ ಹಂಚಿಕೆ ಮಾಡಿ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಫಲಾನುಭವಿಗಳಿಗೆ ಉಪಯೋಗಿಸಲಾಗುತ್ತಿದೆ ಎಂದು ಸ್ಪಷ್ಟಪಡಿಸಿದ್ದಾರೆ.

***************

ಬೆಳಗಾವಿ, ವಿಜಯಪುರ, ಧಾರವಾಡ ಒಳಗೊಂಡಂತೆ ಉತ್ತರ ಕರ್ನಾಟಕದಲ್ಲಿ ರಕ್ಷಣಾ ಕಾರಿಡಾರ್ ನಿರ್ಮಾಣಕ್ಕೆ ಸರ್ಕಾರ ಪ್ರಯತ್ನ ನಡೆಸಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವ ಎಂ.ಬಿ. ಪಾಟೀಲ್ ತಿಳಿಸಿದ್ದಾರೆ.

ವಿಧಾನಸಭೆಯ ಪ್ರಶ್ನೋತ್ತರ ಕಲಾಪದಲ್ಲಿಂದು ಹುಬ್ಬಳ್ಳಿ-ಧಾರವಾಡ ಪಶ್ಚಿಮ ಕ್ಷೇತ್ರದ ಶಾಸಕ ಅರವಿಂದ ಬೆಲ್ಲದ್ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಸಚಿವರು, ದೇಶದ ಏರೋಸ್ಪೇಸ್ ಹಾಗೂ ರಕ್ಷಣಾ ಕ್ಷೇತ್ರಕ್ಕೆ  ಕರ್ನಾಟಕ ಶೇಕಡ ೬೫ ರಷ್ಟು ಕೊಡುಗೆ ನೀಡುತ್ತಿದೆ.  ನಮ್ಮ ರಾಜ್ಯವನ್ನು ಇಕೋ ಸ್ಪೇಸ್ ನಲ್ಲಿಯೂ ಮುಂಚೂಣಿ ರಾಜ್ಯವನ್ನಾಗಿ ಪರಿಗಣಿಸಲಾಗಿದೆ ಎಂದು ಮಾಹಿತಿ ನೀಡಿದರು.

ಬೆಳಗಾವಿ, ವಿಜಯಪುರ, ಧಾರವಾಡ ಜಿಲ್ಲೆಗಳನ್ನೊಳಗೊಂಡ ಪ್ರದೇಶದಲ್ಲಿ ರಕ್ಷಣಾ ಕಾರಿಡಾರ್ ನಿರ್ಮಾಣಕ್ಕಾಗಿ ಈಗಾಗಲೇ ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರನ್ನು ಭೇಟಿಯಾಗಿ ಬೇಡಿಕೆ ಸಲ್ಲಿಸಲಾಗಿದೆ.

ಬೆಂಗಳೂರು-ಮುಂಬೈ ಕೈಗಾರಿಕಾ ಕಾರಿಡಾರ್ ಯೋಜನೆಯಡಿ ಧಾರವಾಡ ಜಿಲ್ಲೆಯಲ್ಲಿ ೩ ಸಾವಿರ ಎಕರೆ ಪ್ರದೇಶದಲ್ಲಿ ಕೈಗಾರಿಕಾ ಪ್ರದೇಶ ಅಭಿವೃದ್ಧಿಪಡಿಸುತ್ತಿದ್ದು, ಏರೋಸ್ಪೇಸ್ ಬಿಡಿ ಭಾಗಗಳ ತಯಾರಿಕಾ ಘಟಕಗಳಿಗೆ ಅಗತ್ಯ ಭೂಮಿ ಮತ್ತು ಮೂಲಭೂತ ಸೌಕರ್ಯಗಳನ್ನು ಒದಗಿಸಲು ಕ್ರಮ ವಹಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

***************

ಲಿಂಗಸೂಗೂರು ಪಟ್ಟಣಕ್ಕೆ ಅಮೃತ್ ೨.೦ ಯೋಜನೆಯಡಿ ೯೪ ಕೋಟಿ ರೂಪಾಯಿ ವೆಚ್ಚದಲ್ಲಿ ಹಾಗೂ ಹಟ್ಟಿ ಪಟ್ಟಣ ಪಂಚಾಯಿತಿಗೆ ಜೆ.ಜೆ.ಎಂ ಯೋಜನೆಯಡಿ ೩೩ ಕೋಟಿ ೨೨ ಲಕ್ಷ ರೂಪಾಯಿ ವೆಚ್ಚದಲ್ಲಿ ಕುಡಿಯುವ ನೀರು ಸರಬರಾಜು ಮಾಡಲಾಗುವುದು ಎಂದು ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವ ಬಿ.ಎಸ್.ಸುರೇಶ್ ತಿಳಿಸಿದ್ದಾರೆ.

ವಿಧಾನಸಭೆಯ ಪ್ರಶ್ನೋತ್ತರ ಕಲಾಪದಲ್ಲಿ  ಶಾಸಕ ಮಾನಪ್ಪ ಡಿ ವಜ್ಜಲ್ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿ ಮಾತನಾಡಿದ ಅವರು, ಕಾಲಮಿತಿಯಲ್ಲಿ ಕಾಮಗಾರಿ ಪೂರ್ಣಗೊಳಿಸಿ ಕುಡಿಯುವ ನೀರಿನ ಸಮಸ್ಯೆ ಪರಿಹರಿಸುವುದಾಗಿ ಭರವಸೆ ನೀಡಿದ್ದಾರೆ.

***************

೨೦೨೬ರ ಹಂಗಾಮಿಗೆ ಕೊಬ್ಬರಿಗೆ ಕನಿಷ್ಠ ಬೆಂಬಲ ಬೆಲೆ ನೀಡಲು ಕೇಂದ್ರ ಸಚಿವ ಸಂಪುಟ ಸಭೆ ಅನುಮೋದನೆ ನೀಡಿದೆ. ತುಂಡು ಕೊಬ್ಬರಿಯ ಬೆಂಬಲ ಬೆಲೆಯನ್ನು ಪ್ರತಿ ಕ್ವಿಂಟಾಲ್‌ಗೆ ೪೪೫ ರೂಪಾಯಿ ಹೆಚ್ಚಿಸಿ ೧೨ ಸಾವಿರದ ೨೭ ರೂಪಾಯಿ ನಿಗದಿಪಡಿಸಲಾಗಿದೆ.

ಉಂಡೆ ಕೊಬ್ಬರಿಯ ಕನಿಷ್ಠ ಬೆಂಬಲ ಬೆಲೆಯನ್ನು ೪೦೦ ರೂಪಾಯಿಗೆ ಹೆಚ್ಚಿಸಿ ೧೨ ಸಾವಿರದ ೫೦೦ ರೂಪಾಯಿ ನಿಗದಿಪಡಿಸಲಾಗಿದೆ.

***************

ಬೆಳಗಾವಿಯ ಭೂತರಾಮನಹಟ್ಟಿಯ ಕಿತ್ತೂರು ರಾಣಿ ಚೆನ್ನಮ್ಮ ಕಿರು ಮೃಗಾಲಯದಲ್ಲಿ ಶೀಘ್ರವೇ ಸರೀಸೃಪ ಹಾಗೂ ಮೊಸಳೆಗಳ ಆವರಣಕ್ಕೆ ಚಾಲನೆ ನೀಡಲಾಗುವುದು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ. ಖಂಡ್ರೆ ತಿಳಿಸಿದ್ದಾರೆ.

ಇಂದು ಮೃಗಾಲಯಕ್ಕೆ ಭೇಟಿ ನೀಡಿದ ಅವರು, ಮೊಸಳೆ ಮತ್ತು ಸರೀಸೃಪಗಳ ಆವರಣದ ಕಾಮಗಾರಿಯ ಪ್ರಗತಿ ಪರಿಶೀಲನೆ ನಡೆಸಿದರು. ೫೦ ಲಕ್ಷ ರೂಪಾಯಿ ವೆಚ್ಚದಲ್ಲಿ ಮೊಸಳೆ ಆವರಣ ಮತ್ತು ೪೦ ಲಕ್ಷ ೮ ಸಾವಿರ ರೂಪಾಯಿ ವೆಚ್ಚದಲ್ಲಿ ಸರೀಸೃಪಗಳ ಆವರಣವನ್ನು ನಿರ್ಮಾಣ ಮಾಡಲಾಗುತ್ತಿದೆ. ಶೀಘ್ರವೇ ೨ ಮೊಸಳೆ ಹಾಗೂ ಹೆಬ್ಬಾವು, ಕಾಳಿಂಗ ಸರ್ಪ, ಮಂಡಲ ಸೇರಿದಂತೆ ೧೨ ಹಾವುಗಳನ್ನು ಈ ಆವರಣದಲ್ಲಿ ಬಿಡಲಾಗುವುದು ಎಂದು ಹೇಳಿದ್ದಾರೆ.

***************

ದ್ವೇಷ ಭಾಷಣಕ್ಕೆ ಹತ್ತು ವರ್ಷಗಳ ಜೈಲು ಶಿಕ್ಷೆ ವಿಧೇಯಕ ಕಾಂಗ್ರೆಸ್ ಪಕ್ಷದ ಕ್ರೂರ ಸಂಪ್ರದಾಯವನ್ನು ಪ್ರತಿಬಿಂಬಿಸುತ್ತದೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಇದು ದ್ವೇಷ ಭಾಷಣವನ್ನು ನಿಯಂತ್ರಿಸುವ ಉದ್ದೇಶವೋ ಅಥವಾ ವಾಕ್ ಸ್ವಾತಂತ್ರ್ಯವನ್ನು ಕಸಿದುಕೊಳ್ಳುವುದೋ ಎಂದು ಪ್ರಶ್ನಿಸಿದ್ದಾರೆ. ಸಾರ್ವಜನಿಕರಲ್ಲಿ ಭಯದ ವಾತಾವರಣ ಸೃಷ್ಟಿಸುವ ಮೂಲಕ ರಾಜಕೀಯ ನಿಯಂತ್ರಣಕ್ಕಾಗಿ ಈ ವಿಧೇಯಕ ಜಾರಿಗೆ ತಂದಿರುವುದು ಸ್ಪಷ್ಟವಾಗಿದೆ ಎಂದು ತಿಳಿಸಿದ್ದಾರೆ.

***************

ಇದೇ ೨೦ ರಿಂದ ರಾಜ್ಯದಲ್ಲಿ ಆಡಳಿತಾರೂಢ ಕಾಂಗ್ರೆಸ್ ಪಕ್ಷದೊಳಗೆ ನಾಟಕೀಯ ಬೆಳವಣಿಗೆ ನಡೆಯಲಿದೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ಭವಿಷ್ಯ ನುಡಿದಿದ್ದಾರೆ.

ಬೆಳಗಾವಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ವರಿಷ್ಠರಾದ ರಾಹುಲ್ ಗಾಂಧಿ, ಮಲ್ಲಿಕಾರ್ಜುನ ಖರ್ಗೆ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಾಯಕತ್ವ ವಿಷಯ ಹಾಗೂ ಅಧಿಕಾರ ಹಂಚಿಕೆ ಒಪ್ಪಂದವನ್ನು ಸ್ಪಷ್ಟಪಡಿಸುವಂತೆ ಆಗ್ರಹಿಸಿದ್ದಾರೆ.

ಕಾಂಗ್ರೆಸ್‌ನಲ್ಲಿ ಎರಡು ಬಣಗಳಾಗಿದ್ದು, ನಾಯಕರ ಭೋಜನ ಸಭೆಗಳ ಬಳಿಕ ಪರಿಸ್ಥಿತಿ ಹದಗೆಟ್ಟಿದೆ ಎಂದು ತಿಳಿಸಿದ್ದಾರೆ.

***************

ಕೇಂದ್ರ ಜಲಶಕ್ತಿ ಮಂತ್ರಾಲಯದ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ವರ್ಚುವಲ್ ಮಾಧ್ಯಮದ ಮೂಲಕ ಆಯೋಜಿಸಿದ್ದ ೪ನೇ ಪೇಯ ಜಲ್ ಸಂವಾದದಲ್ಲಿ ದಾವಣಗೆರೆ ಜಿಲ್ಲೆಯ

ಸಾಧನೆಗಳ ಬಗ್ಗೆ ಮೆಚ್ಚುಗೆ ವ್ಯಕ್ತವಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಜಿ.ಎಂ.ಗಂಗಾಧರ ಸ್ವಾಮಿ ತಿಳಿಸಿದ್ದಾರೆ.

ಕೇಂದ್ರ ಸರ್ಕಾರದ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನಡೆದ ಸಂವಾದದಲ್ಲಿ ರಾಜ್ಯದಿಂದ ದಾವಣಗೆರೆ ಜಿಲ್ಲೆಯನ್ನು ಆಯ್ಕೆ ಮಾಡಲಾಗಿತ್ತು.

ಜಿಲ್ಲೆಯಲ್ಲಿ ಇದುವರೆಗೂ ಒಟ್ಟು ೫೭ ಗ್ರಾಮಗಳು, ೪೫ ಕಂದಾಯ ಗ್ರಾಮಗಳು ಮತ್ತು ಜನ ವಸತಿ ಪ್ರದೇಶಗಳನ್ನು ದಿನದ ೨೪ ಗಂಟೆಗಳ ಕಾಲ ನೀರು ಪೂರೈಕೆ ಗ್ರಾಮಗಳೆಂದು ಘೋಷಿಸಲಾಗಿದೆ. ಜಿಲ್ಲೆಯಲ್ಲಿ ಡೆಂಘಿ ಪ್ರಕರಣಗಳಲ್ಲಿ ಶೇಕಡ ೫೦ರಷ್ಟು ಇಳಿಕೆಯಾಗಿದೆ. ನೀರು ಸೋರಿಕೆಯಲ್ಲೂ ಗಣನೀಯ ಕಡಿತವಾಗಿದೆ ಎಂದು ಜಿಲ್ಲಾಧಿಕಾರಿ ಸ್ಪಷ್ಟಪಡಿಸಿದ್ದಾರೆ.

*******ಮುಕ್ತಾಯ********